**Akashvani : Bangalore**
**Regional Bulletin In Kannada**
**29.11.2024 / 14.30 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**29.11.2024 / 14.30 hrs**
**<><*<><>*><>**

ಮುಖ್ಯಾಂಶಗಳು

**೧. ನವದೆಹಲಿಯಲ್ಲಿಂದು ಪ್ರಧಾನಿ ಭೇಟಿಯಾದ ಮುಖ್ಯಮಂತ್ರಿ ಸಿದ್ದರಾಮಯ್ಯ: ಭದ್ರಾ ಮೇಲ್ದಂಡೆ ಯೋಜನೆಗೆ ೫ ಸಾವಿರದ ೩೦೦ ಕೋಟಿ ಬಿಡುಗಡೆಗೆ ಮನವಿ**

**೨. ಸಚಿವ ಸಂಪುಟ ವಿಸ್ತರಣೆ ಬಗ್ಗೆ ಹೈಕಮಾಂಡ್ ಬಳಿ ಚರ್ಚೆ ನಡೆದಿಲ: ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಸ್ಪಷ್ಟನೆ**

**೩. ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಾಧಿಪತಿಯಾಗಿ ಮುಖ್ಯಮಂತ್ರಿಗೆ ಅಧಿಕಾರ ; ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅಸಮಾಧಾನ**

**೪. ಶ್ರೀರಂಗಪಟ್ಟಣ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸಲು ಕೇಂದ್ರ ಪ್ರವಾಸೋದ್ಯಮ ಇಲಾಖೆಗೆ ೧೦೦ ಕೋಟಿ ವೆಚ್ಚದ ಡಿ.ಪಿಆರ್ ಪ್ರಸ್ತಾವನೆ**

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ಪ್ರಧಾನಿ ನರೇಂದ್ರ ಮೋದಿ ಅವರನ್ನು ನವದೆಹಲಿಯಲ್ಲಿಂದು ಭೇಟಿ ಮಾಡಿ ಮಹತ್ವದ ವಿಚಾರಗಳ ಬಗ್ಗೆ ಚರ್ಚೆ ನಡೆಸಿದ್ದಾರೆ. ಕಳೆದ ೪ ತಿಂಗಳ ಅಂತರದಲ್ಲಿ ಇದು ಅವರ ೨ನೇ ಭೇಟಿಯಾಗಿದೆ. ಭದ್ರಾ ಮೇಲ್ದಂಡೆ ಯೋಜನೆ ನಬಾರ್ಡ್ ಅನುದಾನ ಕಡಿತ, ರಾಜ್ಯದ ತೆರಿಗೆ ಪಾಲು ಹೆಚ್ಚಳ ಸೇರಿದಂತೆ ಹಲವು ಮಹತ್ವದ ವಿಚಾರ ಕುರಿತು ಉಭಯ ನಾಯಕರು ಚರ್ಚೆ ನಡೆಸಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ೫ ಸಾವಿರದ ೩೦೦ ಕೋಟಿ ರೂ. ಹಣ ಬಿಡುಗಡೆ ಮಾಡುವಂತೆ ಮನವಿ ಮಾಡಿದ್ದಾರೆ. ಅಲ್ಲದೇ ನಬಾಡ್ ಸಾಲದ ಪ್ರಮಾಣದಲ್ಲಿ ಶೇ೫೮ರಷ್ಟು ಕಡಿತಗೊಳಿಸಿದ್ದು, ಪೂರ್ಣ ಪ್ರಮಾಣದ ಸಾಲ ನೀಡಬೇಕು. ನಬಾರ್ಡ್ ನಿಂದ ೨೦೨೩-೨೪ರಲ್ಲಿ ೫ ಸಾವಿರದ ೬೦೦ ಕೋಟಿ ರೂಪಾಯಿ ಕೃಷಿ ಸಾಲ ನೀಡಿತ್ತು. ಆದ್ರೆ ೨೦೨೪-೨೫ರಲ್ಲಿ ೨ ಸಾವಿರದ ೩೪೦ ಕೋಟಿ ರೂ. ಕೃಷಿ ಸಾಲ ಮಾತ್ರ ನೀಡಿದೆ ಎಂದು ಪ್ರಧಾನಿಗೆ ನೀಡಿದ ಮನವಿಯಲ್ಲಿ ಪ್ರಸ್ತಾಪಿಸಿದ್ದಾರೆ. ಇದೇ ವೇಳೆ ಕಳಸಾ ಬಂಡೂರಿ ಯೋಜನೆ, ಮೇಕೆದಾಟು ಯೋಜನೆಗೆ ಅನುಮತಿ ನೀಡುವಂತೆ ಮನವಿ ಮಾಡಿದ್ದಾರೆ.

**<><*<><>*><>**

ಸಚಿವ ಸಂಪುಟ ವಿಸ್ತರಣೆ ಬಗ್ಗೆ ಹೈಕಮಾಂಡ್ ಬಳಿ ಚರ್ಚೆ ನಡೆದಿಲ್ಲ ಎಂದು ಉಪಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ತಿಳಿಸಿದ್ದಾರೆ. ದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಾಧ್ಯಮಗಳ ಮುಂದೆ ಮಾಡುವ ಚರ್ಚೆಯಿಂದ ರಾಜಕಾರಣ ನಡೆಯುವುದಿಲ್ಲ ಎಂದು ಹೇಳಿದ್ದಾರೆ. ಹಾಸನ ಸಮಾವೇಶವನ್ನು ಯಾವ ಕಾರಣಕ್ಕೆ ಮಾಡಲಾಗುತ್ತಿದೆ ಎಂಬ ಬಗ್ಗೆ ಮುಖ್ಯಮಂತ್ರಿಗಳು ಮಾಹಿತಿ ನೀಡಿದ್ದು ಪಕ್ಷದ ಭಾಗವಹಿಸುವಿಕೆ ಖಂಡಿತ ಇರಲಿದೆ ಎಂದಿದ್ದಾರೆ. ಡಿಸೆಂಬರ್ ೨೮ ರ ಕಾಂಗ್ರೆಸ್ ಸಂಸ್ಥಾಪನಾ ದಿನಾಚರಣೆ ಬೆಳಗಾವಿಯಲ್ಲಿ ನಡೆಸುವ ಕುರಿತಂತೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರೊಂದಿಗೆ ಚರ್ಚಿಸಲಾಗಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರನ್ನು ಇಂದು ಭೇಟಿಯಾಗಿ ಮಾತುಕತೆ ನಡೆಸಿದರು. ಇದೇ ವೇಳೆ ಸಿದ್ದರಾಮಯ್ಯ ಅವರು ವಯನಾಡು ಕ್ಷೇತ್ರದಿಂದ ಲೋಕಸಭೆಗೆ ಆಯ್ಕೆಯಾಗಿರುವ ಪ್ರಿಯಾಂಕ ಗಾಂಧಿ ಅವರನ್ನು ಅಭಿನಂದಿಸಿದರು. ವಿಧಾನಸಭೆಯ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್

ಗೆಲುವು ಸಾಧಿಸಿರುವ ಹಿನ್ನೆಲೆಯಲ್ಲಿ ರಾಹುಲ್ ಗಾಂಧಿ ಹಾಗೂ ಪ್ರಿಯಾಂಕ ಗಾಂಧಿ ಅವರು ಸಿದ್ದರಾಮಯ್ಯ ಅವರಿಗೂ ಅಭಿನಂದನೆ ತಿಳಿಸಿದರು. ಈ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಪ್ರತ್ಯೇಕವಾಗಿ ಭೇಟಿ ಮಾಡಿ, ಚರ್ಚೆ ನಡೆಸಿದ್ದಾರೆ.

<><*<><>*><>

ಶಿಕ್ಷಣದಲ್ಲಿ ರಾಜಕೀಯ ಬೆರೆಯಬಾರದು ಎಂಬ ಸದುದ್ದೇಶದಿಂದ ಸಂವಿಧಾನದ ಆಶಯಕ್ಕೆ ಪೂರಕವಾಗಿ ರಾಜ್ಯದ ಸಾಂವಿಧಾನಿಕ ಮುಖ್ಯಸ್ಥರೂ ಆದ ಗೌರವಾನ್ವಿತ ರಾಜ್ಯಪಾಲರೇ ವಿಶ್ವವಿದ್ಯಾನಿಲಯಗಳ ಕುಲಾಧಿಪತಿಗಳಾಗಿರುವುದು ಶಿಕ್ಷಣದ ಭೂಷಣ ಎಂದು ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಅಭಿಪ್ರಾಯಪಟ್ಟಿದ್ದಾರೆ.  ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು  ರಾಜ್ಯ ಸರ್ಕಾರ ಸದ್ಯ ಈಗಿರುವ ತನ್ನ ಅಧಿಕಾರವನ್ನು ದುರುಪಯೋಗ ಮಾಡಿಕೊಂಡು ಸರಣಿ ಭ್ರಷ್ಟಾಚಾರಗಳಲ್ಲಿ ತೊಡಗಿರುವುದರ ನಡುವೆಯೇ ಉನ್ನತ ಶಿಕ್ಷಣ ವ್ಯವಸ್ಥೆಯನ್ನು ಮಲಿನಗೊಳಿಸಲು ಹೊರಟಿದೆ ಎಂದು ದೂರಿದ್ದಾರೆ.    ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಾಧಿಪತಿ ಅಧಿಕಾರವನ್ನು ಮುಖ್ಯಮಂತ್ರಿಗೆ ನೀಡಲು ಹೊರಟಿರುವ ಸರ್ಕಾರದ ನಿಲುವು ಗ್ರಾಮೀಣಾಭಿವೃದ್ಧಿ ಅಧ್ಯಯನ ಕ್ಷೇತ್ರದಲ್ಲೂ ಅನಗತ್ಯ ರಾಜಕೀಯ ಹಸ್ತಕ್ಷೇಪಕ್ಕೆ ಅವಕಾಶ ನೀಡಲಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಬೆಳಗಾವಿಯಲ್ಲಿ ಡಿಸೆಂಬರ್ ೯ ರಿಂದ ನಡೆಯಲಿರುವ  ವಿಧಾನ ಮಂಡಲ ಚಳಿಗಾಲ ಅಧಿವೇಶನದ ಹಿನ್ನೆಲೆಯಲ್ಲಿ ಕಾನೂನು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್ ಹಿತೇಂದ್ರ ಹಲಗ ಮತ್ತು ಬಸ್ತವಾಡ ಗ್ರಾಮದ ಹೊರವಲದಲ್ಲಿರುವ ಸುವರ್ಣಸೌಧಕ್ಕೆ ಭೇಟಿ ಅಧಿವೇಶನದ ತಯಾರಿ ಬಗ್ಗೆ ಪರಿಶೀಲನೆ ನಡೆಸಿದ್ದಾರೆ. ಪ್ರತಿಭಟನಾ ಸ್ಥಳಗಳು, ಪೊಲೀಸ ವಸತಿ ವ್ಯವಸ್ಥೆ ಬಗ್ಗೆ ಕೈಗೊಳ್ಳಬೇಕಾದ ಮುಂಜಾಗ್ರತೆ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದಾರೆ.

<><*<><>*><>

ಮಂಡ್ಯ ಜಿಲ್ಲೆಯ ಐತಿಹಾಸಿಕ ಪ್ರವಾಸಿ ತಾಣವಾದ ಶ್ರೀರಂಗಪಟ್ಟಣ ಪ್ರವಾಸೋದ್ಯಮವನ್ನು ಅಭಿವೃದ್ಧಿ ಪಡಿಸಲು ೧೦೦ ಕೋಟಿ ರೂ ವೆಚ್ಚದಲ್ಲಿ ಡಿ.ಪಿಆರ್ ಸಿದ್ಧಪಡಿಸಿ ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿಂದು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದ ಅವರು, ಶ್ರೀ ರಂಗನಾಥ ಸ್ವಾಮಿ ದೇವಾಲಯವನ್ನು ಕೇಂದ್ರವಾಗಿ ಇರಿಸಿಕೊಂಡು ಇದರ ಸುತ್ತಲಿನ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜನ್ಮಸ್ಥಳ, ಪುರಾತನ  ಗಾಟ್ ಗಳ ಸಂರಕ್ಷಣೆ, ವಿವಿಧ ರೀತಿಯ ಸೂಚನಾ ಫಲಕಗಳು, ಕಲ್ಯಾಣಿ, ಮಂಟಪ, ರಸ್ತೆಗಳು ಸೇರಿದಂತೆ ವಿವಿಧ ರೀತಿಯ ಯೋಜನೆಗಳಿಗೆ ಪ್ರಾಮುಖ್ಯತೆ ನೀಡಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಕೇಂದ್ರ ಸರ್ಕಾರದ ವತಿಯಿಂದ ನೀಡಲಾಗುತ್ತಿರುವ ಜನಪರ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಬಗ್ಗೆ ಜಾಗೃತಿ ಮೂಡಿಸಲು ಕೇಂದ್ರ ಸಂವಹನ ಇಲಾಖೆ, ವಾರ್ತಾ ಮತ್ತು ಪ್ರಸಾರ ಸಚಿವಾಲಯ, ಮೈಸೂರು ವತಿಯಿಂದ ಚಿಕ್ಕಬಳ್ಳಾಪುರ ಜಿಲ್ಲೆಯ ಬಾಗೇಪಲ್ಲಿಯ ದಿ ನ್ಯಾಷನಲ್ ಪದವಿ ಕಾಲೇಜು ಆವರಣದಲ್ಲಿ ನಾಳೆಯಿಂದ ಡಿಸೆಂಬರ್ ೨ ರವರೆಗೆ ಛಾಯಾಚಿತ್ರ ಪ್ರದರ್ಶನ ನಡೆಯಲಿದೆ.

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ. ಕೆ.ಸುಧಾಕರ್ ಕಾರ್ಯಕ್ರಮ  ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಪೋಷಣ್ ಅಭಿಯಾನ, ಮಾತೃ ವಂದನಾ, ಆರೋಗ್ಯ ಇಲಾಖೆ ವತಿಯಿಂದ ಆಯುಷ್ಮಾನ್ ಭಾರತ ಆರೋಗ್ಯ ಗುರುತಿನ ಚೀಟಿ ನೋಂದಣಿ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರ, ಸ್ವಸಹಾಯ ಸಂಘಗಳ ಮಹಿಳೆಯರು ತಯಾರಿಸಿದ ಉತ್ಪನ್ನಗಳ ಪ್ರದರ್ಶನ, ಸ್ವಚ್ಛ ಭಾರತ ಅಭಿಯಾನದ ಕುರಿತು ಜಾಗೃತಿ, ಬ್ಯಾಂಕಿನಿಂದ ನಾಗರಿಕರಿಗೆ ಲಭ್ಯವಿರುವ ಕೇಂದ್ರ ಸರ್ಕಾರದ ಸವಲತ್ತುಗಳ ಕುರಿತು ಮಳಿಗೆಗಳನ್ನು ತೆರೆಯಲಾಗಿದೆ.

**<><*<><>*><>**

ಜನಸಾಮಾನ್ಯನಿಗೆ ಅರ್ಥವಾಗುವ ಎಲ್ಲ ಪದಗಳು ಕನ್ನಡದ ಪದವೇ ಎಂದು ನಾಡೋಜ ಬರಗೂರು ರಾಮಚಂದ್ರಪ್ಪ ಅಭಿಪ್ರಾಯಪಟ್ಟಿದ್ದಾರೆ. ತುಮಕೂರಿನ ಗಾಜಿನಮನೆಯಲ್ಲಿಂದು ನಡೆದ ೧೬ನೇ ಕನ್ನಡ ಸಾಹಿತ್ಯ ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಅವರು, ಕನ್ನಡದಲ್ಲಿ ಇತರೆ ಭಾಷೆಗಳ ಬಳಕೆಯ ಬಗ್ಗೆ ಸಾಕಷ್ಟು ಚರ್ಚೆಗಳು ನಡೆದಿವೆ, ಜನಸಾಮಾನ್ಯರಿಗೆ ಅರ್ಥವಾಗುವ ಎಲ್ಲ ಶಬ್ದಗಳು ಕನ್ನಡ ಪದಗಳೇ ಎಂದು ತಿಳಿಸಿದ್ದಾರೆ. ಕನ್ನಡದ ಬೇರೆ ಬೇರೆ ಭಾಷಾ ಪ್ರಕಾರಗಳಲ್ಲಿ ಗ್ರಾಮೀಣರಿಗೆ, ಜನಸಾಮಾನ್ಯರಿಗೆ ಅರ್ಥವಾಗದ ಕನ್ನಡ ಪದಗಳಿಗಿಂತ ಬೇರೆ ಭಾಷೆಯ ಪದಗಳೇ ಅರ್ಥವಾಗುತ್ತಿದೆ, ಕನ್ನಡ ಪರಂಪರೆಯಲ್ಲಿ ಅನ್ಯಭಾಷೆ ಪದಗಳ ಬಳಕೆ ಕರಿಮಣಿಯೊಳಗೆ ಕೆಂಪುಮಣಿಗಳಂತೆ ಎಂದು ಅಭಿಪ್ರಾಯಪಟ್ಟಿದ್ದಾರೆ.

**<><*<><>*><>**

ಕೃಷಿ ಹೊರತುಪಡಿಸಿ, ವಾಣಿಜ್ಯ, ಕೈಗಾರಿಕೆ ಹಾಗೂ ಗಣಿಗಾರಿಕೆ ಸಂಬಂಧಿಸಿದ ಸ್ಥಳಗಳಲ್ಲಿ ಕೊಳವೆ ಬಾವಿ ಕೊರೆದು ಅಂತರ್ಜಲ ಬಳಕೆ ಮಾಡಲು, ಕಡ್ಡಾಯವಾಗಿ ಜಿಲ್ಲಾ ಅಂತರ್ಜಲ ಸಮಿತಿಯಿಂದ ಅನುಮತಿ ಪಡೆಯಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ. ಚಿತ್ರದುರ್ಗದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ಅಂತರ್ಜಲ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಅನುಪಯುಕ್ತ ಹಾಗೂ ವಿಫಲ ಕೊಳವೆ ಬಾವಿಗಳನ್ನು ಮುಚ್ಚಲಾಗಿದೆಯೇ ಎಂಬುದರ ಬಗ್ಗೆ ಅಧಿಕಾರಿಗಳು ತಪಾಸಣೆ ನಡೆಸಬೇಕು. ವಿಫಲ ಕೊಳವೆ ಬಾವಿಗಳನ್ನು ಸೂಕ್ತ ರೀತಿಯಲ್ಲಿ ಮುಚ್ಚಲು ಕ್ರಮ ಕೈಗೊಳ್ಳಬೇಕು. ರೈತರಿಗೆ ಈ ಬಗ್ಗೆ ತಿಳುವಳಿಕೆ ನೀಡುವಂತೆ ಅವರು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ಹಬ್ಬವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ವಿಧಾನಸೌಧದ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ಉದ್ಘಾಟಿಸಲಿದ್ದಾರೆ. ಕರುನಾಡಿನ ಶ್ರೀಮಂತ ಕಲೆ, ಸಾಹಿತ್ಯ, ಸಂಸ್ಕೃತಿ ಹಾಗೂ ಭವ್ಯ ಪರಂಪರೆಗಳ ವೈಭವಪೂರ್ಣ ಉತ್ಸವ ಸೊಬಗನ್ನು ಸಾರುವ ಬೆಂಗಳೂರು ಹಬ್ಬದ ಮೆರವಣಿಗೆ ವಿಧಾನಸೌಧದಿಂದ ಗಾಂಧಿರಸ್ತೆಯವರೆಗೆ ನಡೆಯಲಿದೆ. ವಿವಿಧ ಕಲಾವಿದರು, ಎತ್ತಿನಗಾಡಿ, ನೃತ್ಯಗಾರರು,ಗಾಯಕರು ವರ್ಣ ರಂಜಿತ ಕಲಾಮೇಳಗಳು ೮ ಜನ ಜ್ಞಾನ ಪೀಠ ಪ್ರಶಸ್ತಿ ಪುರಸ್ಕೃತರ ಸ್ತಬ್ದಚಿತ್ರಗಳೊಂದಿಗೆ ೫೦೦ ಕ್ಕೂ ಹೆಚ್ಚು ಕಲಾವಿದರು ೫೦ಕ್ಕೂ ಹೆಚ್ಚು ಕಲಾಮೇಳಗಳು ಭಾಗವಹಿಸಲಿವೆ.

**<><*<><>*><>**

ಹೆದ್ದಾರಿಗಳಲ್ಲಿ ದಟ್ಟ ಮಂಜು ಆವರಿಸುತ್ತಿರುವುದರಿಂದ ವಾಹನಗಳ ಚಾಲನೆಗೆ ಅಡಚಣೆಯಾಗುತ್ತಿದ್ದು, ಅಧಿಕಾರಿಗಳು ಸುರಕ್ಷತಾ ಕ್ರಮ ಕೈಗೊಳ್ಳಬೇಕು ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ನಿರ್ದೇಶನ ನೀಡಿದೆ. ರಸ್ತೆಗಳಲ್ಲಿ ಮಿನುಗುವ ದೀಪ ಅಳವಡಿಸುವುದು, ಇಳಿಜಾರು ಗುರುತಿಸುವುದು, ಅಪಘಾತ ವಲಯಗಳನ್ನು ಗುರುತಿಸುವುದು, ಸೌರ ಘಟಕ ಅಳವಡಿಕೆ ಸೇರಿದಂತೆ ಹಲವು ಕ್ರಮ ಕೈಗೊಳ್ಳುವಂತೆ ಸೂಚಿಸಿದೆ. ಸಂಚಾರ ಪೊಲೀಸರ ಜತೆ ಜಂಟಿ ಕಾರ್ಯಚಾರಣೆ ನಡೆಸಿ ಮಂಜು ಪ್ರದೇಶದಲ್ಲಿ ಗಂಟೆಗೆ ೩೦ ಕಿಲೋ ಮೀಟರ್ ವೇಗದಲ್ಲಿ ವಾಹನ ಚಲಾಯಿಸುವುದರ ಬಗ್ಗೆ ಚಾಲಕರಿಗೆ ಎಚ್ಚರಿಕೆ ನೀಡುವುದು, ಸಾಮಾಜಿಕ ಮಾಧ್ಯಮ ಮತ್ತು ರೇಡಿಯೋ ಮೂಲಕ ಮಾಹಿತಿ ನೀಡುವುದು, ರಾತ್ರಿ ವೇಳೆ ಹೆದ್ದಾರಿಗಳನ್ನು ಪರಿಶೀಲನೆ ನಡೆಸುವುದು, ಮಂಜು ಆವರಿಸಿರುವ ಸ್ಥಳಗಳಲ್ಲಿ ಗಸ್ತು ವಾಹನಗಳನ್ನು ನಿಯೋಜಿಸುವುದು, ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ಇನ್ನಿತರ ಮುಂಜಾಗ್ರತೆಗಳನ್ನು ಕೈಗೊಳ್ಳುವಂತೆ ಹೆದ್ದಾರಿ ಪ್ರಾಧಿಕಾರ ನಿರ್ದೇಶನ ನೀಡಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**